**Bangalore**
**Regional News**
**23.08.2024 / 1430 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಇಂದು ರಾಷ್ಟ್ರೀಯ ಬಾಹ್ಯಕಾಶ ದಿನ; ಬಾಹ್ಯಕಾಶ ಕ್ಷೇತ್ರದಲ್ಲಿ ಭಾರತದ ಸಾಧನೆ ಸ್ಮರಿಸಿದ ಗಣ್ಯರು

೨. ಬಿಜೆಪಿ ಶಾಸಕರ ಅಣತಿಯಂತೆ ೧೫ ವಿಧೇಯಕಗಳನ್ನು ಹಿಂಪಡೆದ ರಾಜ್ಯಪಾಲರು; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪ

೩. ಎತ್ತಿನಹೊಳೆ ಯೋಜನೆ; ಮೊದಲ ಹಂತದ ಏತ, ವಿದ್ಯುತ್ ಪೂರೈಕೆ ಕಾಮಗಾರಿ ಪೂರ್ಣ

೪. ಪರಿಸರಸ್ನೇಹಿ ಉತ್ಪನ್ನ ತಯಾರಿಕೆ ಉತ್ತೇಜಿಸಲು ನೂತನ ಯೋಜನೆ; ಪರಿಸರ ಸಚಿವ ಈಶ್ವರ್ ಖಂಡ್ರೆ

**<><*<><>*><>**

ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ. ಇದರ ಅಂಗವಾಗಿ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಬೆಂಗಳೂರಿನ ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ಸರಣಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತದ ಸಾಧನೆ ಜಗತ್ತಿಗೆ ಮಾದರಿಯಾಗಿದೆ ಎಂದು ಇಸ್ರೋ ನಿವೃತ್ತ ಹಿರಿಯ ನಿರ್ದೇಶಕ ಎಚ್.ಡಿ.ಆನಂದ ಹೇಳಿದ್ದಾರೆ. ದಾವಣಗೆರೆಯ ಅನುಭವ ಮಂಟಪ ಪದವಿ ಪೂರ್ವ ಕಾಲೇಜಿನಲ್ಲಿಂದು ಕೇಂದ್ರ ಸರ್ಕಾರದ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನಾ ಮಂಡಳಿ ಸೇರಿದಂತೆ ವಿವಿಧ ಇಲಾಖೆಗಳ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಬಾಹ್ಯಾಕಾಶ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋದ ಸಾಧನೆಗಳು ದೇಶದ ಕೀರ್ತಿಯನ್ನು ಹೆಚ್ಚಿಸಿವೆ. ಕಳೆದ ದಶಕಗಳಲ್ಲಿ ಕೇವಲ ಬಾಹ್ಯಾಕಾಶ ಸಂಶೋಧನೆಗೆ ಮಾತ್ರ ಸೀಮಿತವಾಗಿದ್ದ ಇಸ್ರೋ, ಇಂದು ಆರ್ಥಿಕವಾಗಿ ದೇಶವನ್ನು ಬಲಪಡಿಸುವ ನಿಟ್ಟಿನಲ್ಲಿ ಮುಂದಾಗಿದೆ ಎಂದರು. ಭವಿಷ್ಯದಲ್ಲಿ ಭಾರತ ಬಾಹ್ಯಾಕಾಶ ಸಂಶೋಧನಾ ಕ್ಷೇತ್ರದಲ್ಲಿ ಮಹತ್ವದ ಸಾಧನೆಗಳನ್ನು ಸಾಧಿಸುವ ಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ಅವರು ಹೇಳಿದರು

<><*<><>*><>

ಬಿಜೆಪಿ ಶಾಸಕರ ಅಣತೆಯಂತೆ ೧೫ ವಿಧೇಯಕಗಳನ್ನು ರಾಜ್ಯಪಾಲರು ಹಿಂಪಡೆದಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ.  ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರ ಮಾತನ್ನು ರಾಜ್ಯಪಾಲರು ಕೇಳುವುದಾದರೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರಗಳು ಏಕೆ ಇರಬೇಕು. ವಿಧೇಯಕಗಳ ಕುರಿತು ಏನಾದರು ಸ್ಪಷ್ಟನೆ ಕೇಳಿದರೆ ನೀಡಬಹುದು. ಅದನ್ನು ತಪ್ಪು ಎಂದು ಹೇಳಲಾಗುವುದಿಲ್ಲ ಎಂದರು.ರಾಜ್ಯ ಸರ್ಕಾರವನ್ನು ಪತನಗೊಳಿಸಲು ಯಾವ ಪ್ರಯತ್ನ ಮಾಡಿದರೂ ಏನು ಆಗುವುದಿಲ್ಲ. ನಾವೂ ಸಹ ಸುಮ್ಮನೆ ಕುಳಿತುಕೊಳ್ಳುವುದಿಲ್ಲ. ನಾವು ನಮ್ಮ ಕೆಲಸ ಮಾಡುತ್ತೇವೆ ಎಂದು ಹೇಳಿದರು. ಜಿಂದಾಲ್‌ಗೆ ಭೂಮಿ ಮಾರಾಟ ಮಾಡಿದ್ದನ್ನು ಈ ಹಿಂದೆ ವಿರೋಧಿಸಿದ್ದ ಕಾಂಗ್ರೆಸ್, ಈಗ ಅದೇ ಜಿಂದಾಲ್‌ಗೆ ಭೂಮಿ ಮಾರಾಟ ಮಾಡಿರುವ ಕುರಿತು ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ಉದ್ಯೋಗ ಸೃಷ್ಟಿಯಾಗಬೇಕು. ರಾಜ್ಯಕ್ಕೆ ಕೈಗಾರಿಕೆಗಳು ಬರಬೇಕು. ರಾಜ್ಯದಲ್ಲಿ ಇರುವ ಕೈಗಾರಿಕಾ ಕಾನೂನಿಗೆ ತಕ್ಕಂತೆ ಭೂಮಿ ನೀಡಲಾಗಿದೆ. ಹೊಸದಾಗಿ ಭೂಮಿ ನೀಡಿಲ್ಲ. ಈ ಹಿಂದೆ ನೀಡಿದ್ದನ್ನೇ ಪರಿಶೀಲಿಸಿ ಸೇಲ್ ಡೀಡ್ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದ ಮಹತ್ವಾಕಾಂಕ್ಷೆಯ ಕುಡಿಯುವ ನೀರಿನ ಯೋಜನೆಯಾದ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯು ನಿರ್ಣಾಯಕ ಘಟ್ಟ ತಲುಪಿದೆ. ೨೦೧೪ರಲ್ಲಿ ಆರಂಭಗೊಂಡ ಯೋಜನೆಯ ಮೊದಲನೇ ಹಂತದ ಏತ ಮತ್ತು ವಿದ್ಯುತ್ ಪೂರೈಕೆಯ ಕಾಮಗಾರಿಗಳ ಅನುಷ್ಠಾನದಲ್ಲಿ ಬಹುದಿನಗಳಿಂದ ಉದ್ಭವಿಸಿದ್ದ ಅಡಚಣೆಗಳನ್ನು ನಿವಾರಿಸಿಕೊಂಡು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಈ ಯೋಜನೆಯಡಿ ಗುರುತ್ವ ಕಾಲುವೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಗುರುತ್ವ ಕಾಲುವೆಯು ಒಟ್ಟು ೨೫೨.೬೧ ಕಿಲೋ ಮೀಟರ್ ಉದ್ದವಿದ್ದು, ಈ ಪೈಕಿ ೪೨ ಕಿಲೋ ಮೀಟರ್ ವರಗಿನ ಕಾಮಗಾರಿ ಪೂರ್ಣಗೊಂಡಿದೆ. ಉಳಿದ ಕಾಮಗಾರಿಗಳು ಅರಣ್ಯ ಮತ್ತು ಭೂಸ್ವಾಧೀನ ಸಮಸ್ಯೆಯಿಂದಾಗಿ ಪೂರ್ಣಗೊಂಡಿಲ್ಲ. ಈ ಹಿನ್ನೆಲೆಯಲ್ಲಿ  ಗುರುತ್ವ ಕಾಲುವೆಯ ೩೨.೫೦ ಕಿಲೋ ಮೀಟರ್‌ನಲ್ಲಿರುವ ನಾಲಾ ಎಸ್ಕೇಪ್ ಮೂಲಕ ಸುಮಾರು ೧೩೨.೫೦ ಕಿಲೋ ಮೀಟರ್ ದೂರದಲ್ಲಿರುವ ವಾಣಿ ವಿಲಾಸ ಸಾಗರಕ್ಕೆ ವೇದಾ ವ್ಯಾಲಿಯ ಮುಖಾಂತರ ತಾತ್ಕಾಲಿಕವಾಗಿ ನೀರನ್ನು ಹರಿಸಲು ಕಾರ್ಯಕ್ರಮ ರೂಪಿಸಲಾಗಿದೆ. ಇದರ ಅನ್ವಯ ನಾಲಾ ಎಸ್ಕೇಪ್ ಮೂಲಕ ನೀರು ವೇದಾ ವ್ಯಾಲಿಯನ್ನು ಪ್ರವೇಶಿಸಿದ್ದು, ಈಗಾಗಲೇ ಹಳೇಬೀಡು ಮತ್ತು ಬೆಳವಾಡಿ ಕೆರೆಗಳು ತುಂಬಿ ಕೋಡಿ ಬಿದ್ದು, ವಾಣಿ  ವಿಲಾಸ ಸಾಗರದತ್ತ ನೀರು ಹರಿಯುತ್ತಿದೆ.

ಪ್ರಸಕ್ತ ವಿಯರ್-೩ ಅನ್ನು ಹೊರತುಪಡಿಸಿ, ಉಳಿದ ಎಲ್ಲಾ ವಿಯರ್‌ಗಳಿಂದ ಸೆಪ್ಟಂಬರ್-೫ರೊಳಗೆ ಪೂರ್ವ ಪರೀಕ್ಷಾರ್ಥವಾಗಿ ನೀರನ್ನೆತ್ತಿ ಗುರುತ್ವ ಕಾಲುವೆಗೆ ಪೂರೈಸಲು ಯೋಜಿಸಲಾಗಿದೆ. ಒಟ್ಟಾರೆ ಎತ್ತಿನಹೊಳೆ ಯೋಜನೆಯನ್ನು ೨೦೨೮ರ ಮಾರ್ಚ್ ವೇಳೆಗೆ ಪೂರ್ಣಗೊಳಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ದಾಖಲೆಯೊಂದನ್ನು ಬಿಡುಗಡೆಗೊಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮಾರುಕಟ್ಟೆ ದರದಲ್ಲಿ ಜಮೀನಿನ ಪರಿಹಾರ ಅಥವಾ ೪೦:೬೦ರ ಅನುಪಾತದಲ್ಲಿ ನಿವೇಶನ ನೀಡುವ ಮುಡಾ ಪ್ರಸ್ತಾವನೆಯನ್ನು ನಿರಾಕರಿಸಿ ಬದಲಿ ಜಮೀನನ್ನು ನೀಡುವಂತೆ ಒತ್ತಾಯಿಸಲಾತ್ತು ಎಂದು ಆರೋಪಿಸಿದ್ದಾರೆ. ೫೦:೫೦ರ ಅನುಪಾತದಲ್ಲಿಯೇ ಮುಡಾ ಬದಲಿ ನಿವೇಶನ ನೀಡಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಮ್ಮ ಮನವಿ ಮಾಡಿದ್ದಾರೆ. ಇವರಿಗೆ ಮಾರುಕಟ್ಟೆ ದರದಲ್ಲಿ ಜಮೀನಿನ ಪರಿಹಾರ ನೀಡುವುದಾಗಿಯೂ ಅಥವಾ ೪೦:೬೦ರ ಅನುಪಾತದಲ್ಲಿ ನಿವೇಶನ ನೀಡುವುದಾಗಿಯೂ ತಿಳಿಸಲಾಗಿತ್ತು. ಆದರೆ ಪ್ರಾಧಿಕಾರದ ಈ ಸಲಹೆಗೆ ಅವರು ಒಪ್ಪಿಗೆ ನೀಡದೇ ಇದ್ದು, ಬದಲಿ ಜಮೀನನ್ನು ನೀಡುವಂತೆ ಒತ್ತಾಯಿಸಿದ್ದಾರೆ. ಇದಕ್ಕೆ ಸಿದ್ದರಾಮಯ್ಯ ಅವರ ಪ್ರತಿಕ್ರಿಯೆ ಏನು ? ಎಂದು ಎಚ್.ಡಿ. ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

<><*<><>*><>

ಪಕ್ಷದ ವರಿಷ್ಠರಿಂದ ಕರೆ ಬಂದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ತಾವು ದೆಹಲಿಗೆ ತೆರಳುತ್ತಿರುವುದಾಗಿ ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಮುಡಾ ಪ್ರಕರಣ ವಿವರ ನೀಡಲು ತೆರಳುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮುಡಾ ಅಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬರೆದ ಪತ್ರವನ್ನು ತಿದ್ದಿದ್ದಾರೆ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ವಿಧಿವಿಜ್ಞಾನ ಪ್ರಯೋಗಾಲಯ ಇದ್ದು, ಅಧಿಕಾರಿಗಳು ತನಿಖೆ ನಡೆಸಲಿದ್ದಾರೆ ಎಂದು ತಿಳಿಸಿದರು. ಬಿಜೆಪಿಯವರ ಸುಮಾರು ಹಗರಣಗಳು ಬೆಳಕಿಗೆ ಬಂದಿದ್ದು, ತನಿಖೆಗೆ ಆದೇಶ ನೀಡಲಾಗುವುದು ಎಂದು ಇದೇ ವೇಳೆ ಜಿ.ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

<><*<><>*><>

ಪರಿಸರ ಮಾಲಿನ್ಯ ತಡೆಗೆ ವಿನೂತನ ಪರಿಹಾರ ಹುಡುಕಲು ಪರಿಸರ ಸ್ನೇಹಿ ಉತ್ಪನ್ನಗಳ ತಯಾರಿಕೆಗೆ ಉತ್ತೇಜನ ನೀಡಲು ನೂತನ ಯೋಜನೆ ರೂಪಿಸುವಂತೆ ರಾಜ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ, ಪರಿಸರ ಇಲಾಖೆಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕಟ್ಟಡದಲ್ಲಿ ಅಳವಡಿಸಲಾಗಿರುವ ಸ್ವಯಂ ಚಾಲಿತ ಬಟ್ಟೆಯ ಕೈಚೀಲ ವಿತರಣಾ ಯಂತ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಏಕಬಳಕೆ ಪ್ಲಾಸ್ಟಿಕ್‌ನಿಂದ ಪರಿಸರಕ್ಕೆ ತೀವ್ರ ಹಾನಿ ಆಗುತ್ತಿದ್ದು, ಇದಕ್ಕೆ ಪರ್ಯಾಯವಾದ ಪರಿಸರ ಸ್ನೇಹಿ ಉತ್ಪನ್ನಗಳ ತಯಾರಿಕೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಾರ್ಯಯೋಜನೆ ರೂಪಿಸುವಂತೆ ತಿಳಿಸಿದರು. ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ವೈಪರೀತ್ಯ ಜಗತ್ತಿಗೇ ಸವಾಲಾಗಿದ್ದು, ಈ ಸಂದರ್ಭದಲ್ಲಿ ಪ್ರಕೃತಿ, ಪರಿಸರ ಸಂರಕ್ಷಣೆಗೆ ಕೈಗೊಳ್ಳುವ ಸಣ್ಣ ಪರಿಹಾರಗಳೂ ದೀರ್ಘ ಕಾಲದಲ್ಲಿ ದೊಡ್ಡ ಪರಿಣಾಮ ಬೀರುತ್ತವೆ ಎಂದರು. ಮಾಲಿನ್ಯ ನಿಯಂತ್ರಣಕ್ಕೆ ಸಾಂಪ್ರದಾಯಿಕ ವಿಧಾನಗಳ ಜೊತೆಗೆ ನಾವೀನ್ಯಪೂರ್ಣ ಮತ್ತು ಆಧುನಿಕ ತಂತ್ರಜ್ಞಾನ ಆಧಾರಿತ ಪರಿಹಾರ ಹುಡುಕುವ ನಿಟ್ಟಿನಲ್ಲಿ ಸಂಶೋಧನೆಗೂ ಉತ್ತೇಜನ ನೀಡಬೇಕು ಎಂದು ಈಶ್ವರ ಖಂಡ್ರೆ ಪ್ರತಿಪಾದಿಸಿದರು. ಏಕಬಳಕೆ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಬಾಟಲಿ, ಚಮಚ, ತಟ್ಟೆ, ಲೋಟ ಇವೆಲ್ಲವೂ ಪರಿಸರಕ್ಕೆ ಶತ್ರುಗಳಾಗಿದ್ದು, ಇದಕ್ಕೆ ಪರ್ಯಾಯವಾಗಿ ಜೈವಿಕ ವಿಘಟನೀಯ ವಸ್ತುಗಳ ಬಳಕೆಗೆ ಶೀಘ್ರ ಆದೇಶ ಹೊರಡಿಸಲು ಕ್ರಮ ಕೈಗೊಳ್ಳುವಂತೆ ಇದೇ ವೇಳೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

<><*<><>*><>

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಗಜಪಡೆಯನ್ನು ಅರಮನೆಗೆ ಬರಮಾಡಿಕೊಳ್ಳುವುದರ ಮೂಲಕ ವಿದ್ಯುಕ್ತವಾಗಿ ಸ್ವಾಗತ ಕೋರಲಾಯಿತು. ಅರಮನೆಯ ಜಯಮಾರ್ತಾಂಡ ದ್ವಾರದಲ್ಲಿ ಆನೆಗಳಿಗೆ ಮೈಸೂರು ಜಿಲ್ಲಾಡಳಿತ, ಅರಮನೆ ಮಂಡಳಿ ವತಿಯಿಂದ ಸಾಂಪ್ರದಾಯಿಕ ಪೂಜೆ ಸಲ್ಲಿಸಿ ಅದ್ದೂರಿಯಾಗಿ ಸ್ವಾಗತಿಸಲಾಯಿತು.

<><*<><>*><>

ಬೆಂಗಳೂರು ನಗರದಲ್ಲಿ ಗಣೇಶ ಹಬ್ಬದ ಪ್ರಯುಕ್ತ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಪಾಲಿಕೆಯ ೬೩ ಉಪ ವಿಭಾಗ ಕಚೇರಿಗಳಲ್ಲಿ ಏಕಗವಾಕ್ಷಿ ಪದ್ಧತಿಯಲ್ಲಿ ಒಂದೇ ಸೂರಿನಡಿ ಅನುಮತಿ ಪತ್ರ ಪಡೆಯಬಹುದಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಬಿಬಿಎಂಪಿ, ಪೊಲೀಸ್, ಬೆಸ್ಕಾಂ ಮತ್ತು ಅಗ್ನಿಶಾಮಕ ಅಧಿಕಾರಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಿ, ಏಕಗವಾಕ್ಷಿ ಕೇಂದ್ರಗಳನ್ನು ತೆರೆಯಲಾಗುವುದು. ೬೩ ಏಕಗವಾಕ್ಷಿ ಕೇಂದ್ರಗಳ ವಿಳಾಸ

ಹಾಗೂ ಏಕಗವಾಕ್ಷಿ ಕೇಂದ್ರಗಳಲ್ಲಿರುವ ಬಿಬಿಎಂಪಿ, ಪೊಲೀಸ್, ಬೆಸ್ಕಾಂ ಮತ್ತು ಅಗ್ನಿಶಾಮಕ ಇಲಾಖೆಯ ನೋಡಲ್ ಅಧಿಕಾರಿಗಳ ವಿವರವಾದ ಮಾಹಿತಿಯನ್ನು ಶೀಘ್ರವೇ ಬಿಡುಗಡೆ ಮಾಡಲಾಗುತ್ತದೆ. ಅದರನುಸಾರ ಗಣೇಶ ಮೂರ್ತಿಗಳನ್ನಿಡುವವರು ಏಕಗವಾಕ್ಷಿ ಸ್ಥಳಕ್ಕೆ ಭೇಟಿ ನೀಡಿ ಒಂದೇ ಸ್ಥಳದಲ್ಲಿ ಅನುಮತಿ ಪಡೆಯಬಹುದೆಂದು ತಿಳಿಸಿದ್ದಾರೆ.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಆಪ್ ಆಧಾರಿತ ಜಾನುವಾರು ಗಣತಿ ಮಾಡಲಾಗುತ್ತಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕ ಡಾ.ರಾಜು ಬಿ.ದೇಶಮುಖ್ ತಿಳಿಸಿದ್ದಾರೆ. ೨೧ನೇ ಜಾನುವಾರು ಗಣತಿಯು ಸೆಪ್ಟೆಂಬರ್ ೧ರಂದು ದೇಶದಾದ್ಯಂತ ಆರಂಭಗೊಂಡು ಡಿಸೆಂಬರ್ ೩೧ರವರೆಗೆ ಚಾಲ್ತಿಯಲ್ಲಿರಲಿದೆ. ಗಣತಿದಾರರು ಇದೇ ಮೊದಲ ಬಾರಿಗೆ ಸ್ಮಾರ್ಟ್ ಫೋನ್ ಬಳಸಿ ಮನೆ ಮನೆಗೆ ತೆರಳಿ ಗಣತಿಯಲ್ಲಿ ತೊಡಗಲಿದ್ದಾರೆ.

<><*<><>*><>

ಭಾರತ ಸರ್ಕಾರ ಸಿರಿಧಾನ್ಯ ವರ್ಷ ಎಂದು ಘೋಷಣೆ ಮಾಡಿರುವುದರಿಂದಾಗಿ ಸಿರಿಧಾನ್ಯವನ್ನು ಬೆಳೆಯುವುದಕ್ಕೆ ಕೃಷಿ ಇಲಾಖೆ ಪ್ರೋತ್ಸಾಹ ನೀಡಬೇಕು ಎಂದು ಸರ್ಕಾರದ ವಿಶೇಷ ದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ ತಿಳಿಸಿದರು. ತುಮಕೂರಿನಲ್ಲಿ ಮಾತನಾಡಿದ ಅವರು, ಇಡೀ ರಾಜ್ಯದಲ್ಲಿ ಅತಿ ಹೆಚ್ಚು ಸಿರಿಧಾನ್ಯ ಬೆಳೆಯುವ ಪ್ರದೇಶ ತುಮಕೂರು ಜಿಲ್ಲೆಯಲ್ಲಿದೆ. ಇದನ್ನು ಉಪಯೋಗಪಡಿಸಿಕೊಂಡು ರೈತರಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ರಮೇಶ್ ಮಾತನಾಡಿ, ರಾಜ್ಯ ಸರ್ಕಾರ ಸಿರಿಧಾನ್ಯ ಬೆಳೆಯುವ ರೈತರಿಗೆ ೧೦ ಸಾವಿರ ಪ್ರೋತ್ಸಾಹ ನೀಡುತ್ತಿದ್ದು, ತುಮಕೂರು ಜಿಲ್ಲೆಯಲ್ಲಿ ೨.೪೫ ಕೋಟಿ ಪ್ರೋತ್ಸಾಹಧನವನ್ನು ರೈತರಿಗೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ, ಬೆಂಗಳೂರು ಗ್ರಾಮಾಂತರ ಸಂಸದ ಡಾ.ಮಂಜುನಾಥ್, ಶಾಸಕರಾದ ಬಿ.ಸುರೇಶ್ ಗೌಡ ಸೇರಿದಂತೆ ಉಪಸ್ಥಿತರಿದ್ದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>